ಪೈಕಿ 8 ವೈದ್ಯಾಧಿಕಾರಿಗಳ ಪೈಕಿ 8 ವೈದ್ಯಾಧಿಕಾರಿಗಳನ್ನು ಅಮಾನತ್ತುಗೊಳಿಸಿದ್ದು, ಪ್ರಕರಣಗಳು ನ್ಯಾಯಾಲಯದಲ್ಲಿ ಬಾಕಿ ಇದೆ ಜಿಲ್ಲಾ ಪಂಚಾಯತ್ ಮತ್ತು ಜಿಲ್ಲಾ ಆ ಕು ಕ ಅಧಿಕಾರಿಗಳು ಹರಾತ್ ದಾಳಿ ನಡೆಸಿ ಲಂಚ ಪ್ರಕರಣದ ಆರೋಪದ ಮೇಲೆ 5 ಪ್ರಕರಣಗಳು ಕಂಡು ಬಂದಿದ್ದು 4 ವೈದ್ಯಾಧಿಕಾರಿಗಳನ್ನು ಅಮಾನತ್ತುಗೊಳಿಸಿ ದೋಷಾರೋಪಣೆ ಪಟ್ಟಿಯನ್ನು ಜಾರಿಗೊಳಿಸಲಾಗಿದೆ ಸದರಿ ಪ್ರಕರಣಕ್ಕೆ ನಿವೃತ್ತ ನ್ಯಾಯಾಧೀಶರಿಂದ ಇಲಾಖಾ ವಿಚಾರಣೆ ಪ್ರಕ್ರಿಯೆಯಲ್ಲಿದೆ ಭ್ರಷ್ಟಾಚಾರದಲ್ಲಿ ಭಾಗಿಯಾಗಿರುವ 13 ಅರೆ–ವೈದ್ಯಕೀಯ ಸಿಬ್ಬಂದಿಗಳು ಇವರುಗಳ ಪೈಕಿ ಒಬ್ಬ ನೌಕರರನ್ನು ಸೇವೆಯಿಂದ ವಜಾಗೊಳಿಸಲಾಗಿದೆ ಉಳಿದ ನೌಕರರನ್ನು ಅಮಾನತ್ತುಗೊಳಿಸಿ ಇಲಾಖಾ ವಿಚಾರಣೆಗೆ ಒಳಪಡಿಸಿ, ವಿಚಾರಣೆ ಮುಗಿದ ನಂತರ ನಿಯಮಾನುಸಾರ ಶಿಸ್ತು ಕ್ರಮ ತೆಗೆದುಕೊಳ್ಳಲಾಗುವುದು

ಇ) ರಾಜ್ಯದ ಸರ್ಕಾರಿ ಆಸ್ಪತ್ರೆಗಳಲ್ಲಿ ಭ್ರಷ್ಟಾಚಾರವನ್ನು ತಡೆಗಟ್ಟಲು ಸಾರ್ವಜನಿಕರ ಮಾಹಿತಿಗಾಗಿ ಆಸ್ಪತ್ರೆಗಳ ಸಿಬ್ಬಂದಿಯವರು ಅಕ್ರಮ ಸಂಭಾವನೆ ಕೇಳಿದಲ್ಲಿ ನೇರವಾಗಿ ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕರುಗಳ ಗಮನಕ್ಕೆ ತರಲು ಹಾಗೂ ಹೆಚ್ಚಿನ ಮಾಹಿತಿ ನೀಡಲು ನೇರವಾಗಿ ಲೋಕಾಯುಕ್ತ ಇವರಿಗೆ ಸಂಪರ್ಕಿಸಲು ನಾಮಫಲಕಗಳನ್ನು ಆಸ್ಪತ್ರೆಯ ಮುಖ್ಯ ದ್ವಾರ ಕಛೇರಿಗಳ ಮುಂದೆ ಪ್ರದರ್ಶಿಸಲಾಗಿದೆ

ಇಲಾಖೆಯಲ್ಲಿ ಜಾಗೃತ ಕೋಶ ಚಾಲನೆಯಲ್ಲಿರುತ್ತದೆ

ಇಲಾಖೆಯ ಹಿರಿಯ ಅಧಿಕಾರಿಗಳನ್ನು ವಿಭಾಗೀಯ ವಿಜಿಲೆನ್ಸ್ ಅಧಿಕಾರಿಗಳಾಗಿ ನೇಮಕ ಮಾಡಲಾಗಿರುತ್ತದೆ

ಪ್ರತಿ ಆಸ್ಪತ್ರೆಯಲ್ಲಿಯೂ ನಾಗರಿಕ ಸನದ್ದು ಪ್ರದರ್ಶಿಸುವ ವ್ಯವಸ್ಥೆ ಮಾಡಲಾಗಿದ್ದು ಅದರಲ್ಲಿ ಸರ್ಕಾರಿ ಆಸ್ಪತ್ರೆಗಳಲ್ಲಿ ಯಾರಿಗೂ ಹಣ ಪಾವತಿ ಮಾಡಬೇಕಾದ ಅವಶ್ಯಕತೆ ಇರುವುದಿಲ್ಲ ಎಂದು ಸ್ಪಷ್ಟವಾಗಿ ನಮೂದಿಸಲಾಗಿದೆ ನಿರ್ದೇಶನಾಲಯದ ಕಾರ್ಯಕ್ರಮ ಅಧಿಕಾರಿಗಳನ್ನು ಪ್ರತಿ ಜಿಲ್ಲೆಗೆ ಒಬ್ಬರಂತೆ ಉಸ್ತುವಾರಿ ಅಧಿಕಾರಿಗಳಾಗಿ ನೇಮಿಸಲಾಗಿರುತ್ತದೆ

**597 (703) ಶ್ರೀ ಕೃಷ್ಣ ಪಾಲೇಮಾರ್ ಜಿ (ಸುರತ್ಕಲ್) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?**

ಅ) ಪರಿಶಿಷ್ಟ ಜಾತಿ ಮತ್ತು ವರ್ಗಗಳ ಡಾ ಅಂಬೇಡ್ಕರ್ ಅಭಿವೃದ್ಧಿ ನಿಗಮದ ಹಣಕಾಸು ಮತ್ತು ಶೈಕ್ಷಣಿಕ ಯೋಜನೆಗಳನ್ನು ಪರಿಷ್ಕರಣೆಗೊಳಿಸಲು ಸರ್ಕಾರ ಕ್ರಮ ಜರುಗಿಸಿದೆಯೇ?

ಆ) ಹೌದಾದಲ್ಲಿ, ಆ ಕುರಿತು ವಿವರಗಳೇನು?

ಇ) ಈ ಕುರಿತು ಅಧ್ಯಯನ ನಡೆಸಲು ಇಂಡಿಯನ್ ಇನ್ಸ್‌ಟಿಟ್ಯೂಟ್ ಆಫ್ ಸೈನ್ಸ್ ಮ್ಯಾನೇಜ್‌ಮೆಂಟ್‌ಗೆ ವಹಿಸಿದ್ದು, ಅದು ತನ್ನ ವರದಿಯನ್ನು ನೀಡಿದೆಯೇ? ಹಾಗಿದ್ದಲ್ಲಿ ಈ ಬಗ್ಗೆ ಕೈಗೊಂಡ ಕ್ರಮಗಳೇನು?

ಈ) ಪರಿಶಿಷ್ಟ ಜಾತಿ ಮತ್ತು ವರ್ಗಗಳ ಜನರನ್ನು ಆರ್ಥಿಕವಾಗಿ ಸಬಲಗೊಳಿಸಲು ಸಾಲ ಯೋಜನೆಯಲ್ಲಿ ಮಾರ್ಪಾಡು ಮಾಡುವ ಚಿಂತನೆ ಸರ್ಕಾರದ ಮುಂದಿದೆಯೇ?

ಉ) ಹಾಗಿದ್ದಲ್ಲಿ, ಈ ಬಗ್ಗೆ ಕಾರ್ಯಕ್ರಮಗಳೇನು?

**ಶ್ರೀ ಬಾಲಚಂದ್ರ ಲ ಜಾರಕಿಹೊಳಿ (ಸಮಾಜ ಕಲ್ಯಾಣ ಸಚಿವರು)**

ಅ) ಇಲ್ಲ

ಆ) ಉದ್ಭವಿಸುವುದಿಲ್ಲ

ಇ) ಹೌದು ಇಂಡಿಯನ್ ಇನ್ಸ್‌ಟಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್ ಅಧ್ಯಯನ ನಡೆಸಿ ತನ್ನ ವರದಿಯನ್ನು ನೀಡಿದೆ ವರದಿಯಲ್ಲಿ ಮಾಡಲಾಗಿರುವ ಶಿಫಾರಸ್ಸುಗಳ ಹಿನ್ನೆಲೆಯಲ್ಲಿ ಕೈಗೊಳ್ಳಬೇಕಾದ ಕ್ರಮಗಳು ಪರಿಶೀಲನಾ ಹಂತದಲ್ಲಿದೆ

ಈ) ಸ್ವಯಂ ಉದ್ಯೋಗ ಯೋಜನೆಯಲ್ಲಿ ಸಣ್ಣಪುಟ್ಟ ವ್ಯಾಪಾರಸ್ಥರಿಗೆ ಆರ್ಥಿಕ ಸಹಾಯವನ್ನು ಒದಗಿಸಲು ಮೈಕ್ರೋ ಕ್ರೆಡಿಟ್ ಯೋಜನೆಯನ್ನು ಜಾರಿಗೆ ತರುವ ಪ್ರಸ್ತಾವನೆ ಪರಿಶೀಲನಾ ಹಂತದಲ್ಲಿದೆ

ಯೋಜನೆಯ ರೂಪುರೇಷೆಗಳು ಅನುಮೋದನೆಯಾದ ನಂತರ ನಿಗಮವು ಕಾರ್ಯಕ್ರಮಗಳನ್ನು ಜಾರಿಗೆ ತರುತ್ತದೆ

**598 (704) ಶ್ರೀ ಕೃಷ್ಣ ಪಾಲೇಮಾರ್ ಜೆ (ಸುರತ್ಕಲ್) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?**

ಅ) ಹಿಂದುಳಿದ ವರ್ಗಗಳ ಕಲ್ಯಾಣ ಕಾರ್ಯಕ್ರಮಗಳಿಗಾಗಿ ಸರ್ಕಾರ ಆರ್ಥಿಕ ಸಾಲಿನಲ್ಲಿ ಮಂಜೂರು ಮಾಡಿದ ಹಣದ ಮೊತ್ತ ಎಷ್ಟು? ಅದು ಇಲಾಖಾ ಬೇಡಿಕೆಗೆ ಅನುಗುಣವಾಗಿದೆಯೇ?

ಆ) ಹಿಂದುಳಿದ ವರ್ಗಗಳ ಜನಸಂಖ್ಯೆಯ ಆಧಾರದ ಮೇಲೆ ಯೋಜನೆಗಳನ್ನು ರೂಪಿಸುವ ಅಗತ್ಯತೆಯನ್ನು ಸರ್ಕಾರ ಮನಗಂಡಿದೆಯೇ?